# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 04/06/2022 ರಂದು ವಾರ್ಡಿನ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ವಾರ್ಡಿನ ಕೊಂದು ಕೋರತೆಗಳ ಬಗ್ಗೆ ನಡೆದ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :-**

- ಶ್ರೀ.ರವಿವಡ್ಡರ್, ಸಾ.ಕಾ.ಪಾ.ಅ, ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ–31.
- ಶ್ರೀ. ಬಸವರಾಜು, ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ–31.
- ಶ್ರೀ. ವಿನಯ, ಕಿರಿಯ ಆರೋಗ್ಯ ಪರೀವಿಕ್ಷಕರು ವಾರ್ಡ್ ಸಂಖ್ಯೆ–31.
- ಶ್ರೀ. ಹರೀಶ್, ಕಂದಾಯ ಅಧಿಕಾರಿಗಳು ವಾರ್ಡ್ ಸಂಖ್ಯೆ–31.
- ಶ್ರೀ. ರಾಹುಲ್, ಸಿವಿಲ್ ಇಂಜಿನೀಯರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್ ಸಂಖ್ಯೆ–31.
- ಶ್ರೀ. ಅಕ್ಕಮ್ಮ, ಎಲೆಕ್ಟ್ರಿಕ್ಲ್ ಇಂಜಿನೀಯರ್ ಬೆಸ್ಕಾಮಂ ವಾರ್ಡ್ ಸಂಖ್ಯೆ–31.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–31 ರ ವಾರ್ಡ್ ಸಮಿತಿ ಸಭೆಯನ್ನು ತಮಿಳ್ ಸಂಘ ಸ್ಕೂಲ್‌ನಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೊರತೆಗಳನ್ನು ಸದಸ್ಯರು ಮತ್ತು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡತೆ ತಿಳಿಸಲಾಗಿರುತ್ತದೆ.

❖ **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯ ಸೌಕಾರ್ ಲೇನ್ ಮುಖ್ಯ ರಸ್ತೆಯಲ್ಲಿನ ಕಲ್ವರ್ಟ್ ಮೇಲಿನ ಸ್ಲಾಬ್‌ಗಳನ್ನು ಬದಲಿಸಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಹೆಚ್.ಬಿ ಲೇಔಟ್ ರಸ್ತೆ ಬದಿಯ ಮೋರಿ ಸ್ವಚ್ಛಗೋಳಿಸಲು ಸೂಚಿಸಿದರು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

❖ **ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು**

- ಕಿರಿಯ ಆರೋಗ್ಯ ಪರೀವಿಕ್ಷಕರುಇಂದಿನ ಸಭೆಯಲ್ಲಿ ಎದ್ದುನಿಂತು ಇಂದು 54–ಪೌರಕಾರ್ಮಿಕರು, 12–ಆಟೋ, 3–ಕಾಂಪ್ಯಾಕ್ಟರ್ ಹಾಜರಾಗಿವೆ ಎಂದು ತಿಳಿಸಿದರು.

* ವಾರ್ಡ್ ವ್ಯಾಪ್ತಿಯಲ್ಲಿನ ಶಾದಾಬ್‌ನಗರ ಕಸ ನಿರ್ವಹಣೆ ಸರಿಯಾಗಿ ಮಾಡುತ್ತಿಲ್ಲ, ಕೂಡಲೆ ಈ ಸಮಸ್ಯೆ ಪರಿಹರಿಸಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

❖ **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

* ವಾರ್ಡ್ ವ್ಯಾಪ್ತಿಯಲ್ಲಿನ ನೀರಿನ ಸಮಸ್ಯೆಗಳನ್ನು ಕೂಡಲೆ ಪರಿಹರಿಸಬೇಕಾಗಿ ಸೂಚಿಸಿದರು
* ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮನೆಗೆ ವಾಟರ್ ಮೀಟರ್ ಹೆಚ್ಚಿನ ಸಂಖ್ಯೆಯಲ್ಲಿ ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ಅರಿವು ಮೂಡಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

❖ **ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು**

* ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಹೆಚ್ಚಾಗಿ ರೀಪೇರಿಗಳಿಗೆ ಒಳಗಾಗುತ್ತಿದ್ದು ಕೂಡಲೆ ಕಾರ್ಯಾಚರಣೆ ನಿರ್ವಹಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಕಾಮಗಾರಿ ಸೂಪರ್‌ವೈಸರ್‌ಗೆ ಸೂಚಿಸಿದರು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–31**

ಪ್ರತಿಗಳನ್ನು:

* ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
* ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
* ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
* ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
* ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
* ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
* ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
* ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
* ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರೀಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.
* ಕಛೇರಿ ಪ್ರತಿ.